/

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಗ್ರಾಮ ಪಂಚಾಯತಿ ವ್ಯಾಪ್ತಿಯ ಎಲ್ಲಾ ಆಸ್ತಿಗಳನ್ನು ಡಿಜಿಟಲೀಕರಣಗೊಳಿಸಿ ತೆರಿಗೆ ವ್ಯಾಪ್ತಿಗೆ ಒಳಪಡಿಸುವ ಮತ್ತು ಮ್ಯಾನ್ಯೂಯಲ್ ಸಮೀಕ್ಷೆ ಕೈಗೊಳ್ಳಲು ಮಾರ್ಗಸೂಚಿಗಳ ಬಗ್ಗೆ.

ಓದಲಾಗಿದೆ: 1) ಮಾನ್ಯ ಮುಖ್ಯಮಂತ್ರಿಗಳ 2019-20ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 222.

2) ದಿನಾಂಕ:21-03-2019ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿಗಳು.

3) ದಿನಾಂಕ:23-07-2019ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿಗಳು

******

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿನ ಎಲ್ಲಾ ಆಸ್ತಿಗಳನ್ನು ಡಿಜಿಟಲೀಕರಣಗೊಳಿಸುವ ಮೂಲಕ ಆಸ್ತಿಯ ಮಾಹಿತಿಯನ್ನು ಕರಾರುವಕ್ಕಾಗಿಸಲು ಹಾಗೂ ತೆರಿಗೆ ವ್ಯಾಪ್ತಿಯನ್ನು ವಿಸ್ತರಿಸಲು ಉದ್ದೇಶಿಸಲಾಗಿದೆ. ಈ ಕಾರ್ಯವನ್ನು ಕೈಗೊಳ್ಳುವ ಬಗ್ಗೆ 2019-20ನೇ ಸಾಲಿನ ಆಯವ್ಯಯದಲ್ಲಿ ಮಾನ್ಯ ಮುಖ್ಯಮಂತ್ರಿಗಳು ಘೋಷಿಸಿರುತ್ತಾರೆ. ಈ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ ಓದಲಾದ (2)ರ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ವಿವರವಾಗಿ ಚರ್ಚಿಸಿ, ಬೆಂಗಳೂರು ನಗರ ಜಿಲ್ಲೆಯಲ್ಲಿನ ಆಸ್ತಿಗಳನ್ನು ಡಿಜಿಟಲಿಕರಣಗೊಳಿಸುವ ಯೋಜನೆಯನ್ನು ಪ್ರಾಯೋಗಿಕವಾಗಿ ಕೈಗೊಳ್ಳಲು ಹಾಗೂ ಉಳಿದ ಜಿಲ್ಲೆಗಳಲ್ಲಿ ಆಸ್ತಿಗಳ ಸಂಪೂರ್ಣ ಮಾಹಿತಿಯನ್ನು ಮ್ಯಾನ್ಯೂಲ್ ಸಮೀಕ್ಷೆ ಮೂಲಕ ಕೈಗೊಳ್ಳಲು ತೀರ್ಮಾನಿಸಲಾಗಿದೆ. ಓದಲಾದ(3)ರ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ವಿವರವಾಗಿ ಚರ್ಚಿಸಿ, ಬೆಂಗಳೂರು ನಗರ ಜಿಲ್ಲೆಯಲ್ಲಿನ ಎಲ್ಲಾ ಆಸ್ತಿಗಳನ್ನು ಡಿಜಿಟಲಿಕರಣಗೊಳಿಸುವ ಮಾದರಿಯಲ್ಲಿ ತುಮಕೂರು ಜಿಲ್ಲೆಯ ಗ್ರಾಮ ಪಂಚಾಯತಿಗಳಲ್ಲಿ ಮ್ಯಾನ್ಯೂಯಲ್ ಆಗಿ ತೆರಿಗೆ ವ್ಯಾಪ್ತಿಯ ಹೊರಗೆ ಉಳಿದ ಆಸ್ತಿಗಳನ್ನು ತೆರಿಗೆ ವ್ಯಾಪ್ತಿಗೆ ಒಳಪಡಿಸಲು ಪ್ರಾಯೋಗಿಕವಾಗಿ ಮ್ಯಾನ್ಯೂಯಲ್ ಆಗಿ ಸಮೀಕ್ಷೆ ಕೈಗೊಳ್ಳಲು ತೀರ್ಮಾನಿಸಲಾಗಿದೆ. ಸದರಿ ತೀರ್ಮಾನದ ರೀತ್ಯಾ ಆಸ್ತಿಗಳ ಡಿಜಿಟಲೀಕರಣ ಹಾಗೂ ಮ್ಯಾನ್ಯೂಲ್ ಸಮೀಕ್ಷೆ ಕೈಗೊಳ್ಳುವ ಬಗ್ಗೆ ವಿವರವಾದ ಮಾರ್ಗಸೂಚಿಯನ್ನು ಹೊರಡಿಸಲು ಸರ್ಕಾರವು ನಿರ್ಣಯಿಸಿದೆ.

ಆದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 457 ಗ್ರಾಪಂಅ 2019**

**ಬೆಂಗಳೂರು, ದಿನಾಂಕ:06-08-2019.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಬೆಂಗಳೂರು ನಗರ ಜಿಲ್ಲೆಯಲ್ಲಿನ ಆಸ್ತಿಗಳನ್ನು ಡಿಜಿಟಲಿಕರಣಗೊಳಿಸುವ ಯೋಜನೆಯನ್ನು ಪ್ರಾಯೋಗಿಕವಾಗಿ ಕೈಗೊಳ್ಳಲು ಹಾಗೂ ತುಮಕೂರು ಜಿಲ್ಲೆಯಲ್ಲಿ ಆಸ್ತಿಗಳ ಸಂಪೂರ್ಣ ಮಾಹಿತಿಯನ್ನು ಮ್ಯಾನ್ಯೂಲ್ ಸಮೀಕ್ಷೆ ಮೂಲಕ ಕೈಗೊಳ್ಳಲು ತೀರ್ಮಾನಿಸಲಾಗಿದ್ದು, ಸದರಿ ತೀರ್ಮಾನದ ರೀತ್ಯಾ ಆಸ್ತಿಗಳ ಡಿಜಿಟಲೀಕರಣ ಹಾಗೂ ಮ್ಯಾನ್ಯೂಲ್ ಸಮೀಕ್ಷೆ ಕೈಗೊಳ್ಳುವ ಬಗ್ಗೆ ವಿವರವಾದ ಮಾರ್ಗಸೂಚಿಗಳನ್ನು ಈ ಕೆಳಕಂಡಂತೆ ಸರ್ಕಾರವು ಹೊರಡಿಸಿದೆ.

## ಗ್ರಾಮ ಪಂಚಾಯತಿ ವ್ಯಾಪ್ತಿಯ ಆಸ್ತಿಗಳನ್ನು ಡಿಜಿಟಲೀಕರಣಗೊಳಿಸುವ ಬಗ್ಗೆ ಮಾರ್ಗಸೂಚಿಗಳು:

**ಉದ್ದೇಶಗಳು:**

1) ಪಂಚತಂತ್ರ ಮತ್ತು ಇ-ಸ್ವತ್ತು ತಂತ್ರಾಂಶದಲ್ಲಿ ಸೇರದೇ ಇರುವ ಹೊಸ ಆಸ್ತಿಗಳ ಗುರುತಿಸುವಿಕೆ ಮತ್ತು ಸದರಿ ಆಸ್ತಿಗಳನ್ನು ತೆರಿಗೆ ವ್ಯಾಪ್ತಿಗೆ ತರುವುದು.
2) ಪಂಚತಂತ್ರ ತಂತ್ರಾಂಶದಲ್ಲಿದ್ದು, ಇ-ಸ್ವತ್ತು ತಂತ್ರಾಂಶದಲ್ಲಿ ಇಲ್ಲದೇ ಇರುವ ಆಸ್ತಿಗಳ ದಾಖಲೆಗಳೊಂದಿಗೆ ಇ-ಸ್ವತ್ತು ತಂತ್ರಾಂಶಕ್ಕೆ ಸೇರ್ಪಡೆ ಮಾಡುವುದು.
3) ಇ-ಸ್ವತ್ತು ತಂತ್ರಾಂಶದಲ್ಲಿರುವ ಆಸ್ತಿಗಳನ್ನು ಪರಿಶೀಲಿಸಿ ದೃಢೀಕರಿಸುವುದು.

**ಯೋಜನೆಯ ಅನುಷ್ಠಾನ:**

ಡಿಜಿಟಲೀಕರಣ ಯೋಜನೆಯನ್ನು ಬೆಂಗಳೂರು ನಗರ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ Pilot ಆಗಿ ಅನುಷ್ಠಾನ ಮಾಡುವುದು.ಗ್ರಾಮ ಪಂಚಾಯತಿಯ ಆಸ್ತಿಗಳ ಡಿಜಿಟಲೀಕರಣ ಯೋಜನೆಯನ್ನು ಬೆಂಗಳೂರು ನಗರ ಜಿಲ್ಲೆಯ ಎಲ್ಲಾಗ್ರಾಮ ಪಂಚಾಯತಿಗಳಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಗಣಕೀಕರಣ ಲೆಕ್ಕ ಶೀರ್ಷಿಕೆ 2515-00-101-0-14-054 ಅನುದಾನದಲ್ಲಿ ಅನುಷ್ಠಾನ ಮಾಡುವುದು.

**ಚಟುವಟಿಕೆಗಳು:**

1. **ಪಂಚತಂತ್ರ ಮತ್ತು ಇ-ಸ್ವತ್ತು ತಂತ್ರಾಂಶಗಳಲ್ಲಿ ಸೇರದೇ ಇರುವ ಹೊಸ ಆಸ್ತಿಗಳ ಗುರುತಿಸುವಿಕೆ ಮತ್ತು ಸದರಿ ಆಸ್ತಿಗಳನ್ನು ತೆರಿಗೆ ವ್ಯಾಪ್ತಿಗೆ ತರುವುದು.**
   - ಗ್ರಾಮ ಪಂಚಾಯತಿಯಲ್ಲಿ ಪಂಚತಂತ್ರ ಮತ್ತು ಇ-ಸ್ವತ್ತು ತಂತ್ರಾಂಶಗಳಲ್ಲಿ ಸೇರ್ಪಡೆಯಾಗದಿರುವ ಆಸ್ತಿಗಳು ಮತ್ತು ತೆರಿಗೆ ವ್ಯಾಪ್ತಿಗೆ ಬರದೇ ಇರುವ ಎಲ್ಲಾ ಆಸ್ತಿಗಳನ್ನು ಗುರುತಿಸುವುದು.
   - KSRSAC ರವರಿಂದ ಪಡೆದ ನಕ್ಷೆಯ ಪ್ರತಿಯೊಂದಿಗೆ field visit ಮಾಡಿ polygon ಸೃಜಿಸಿ KSRSAC ರವರಿಗೆ ಹಿಂದಿರುಗಿಸುವುದು. ಸದರಿ ಆಸ್ತಿಗಳನ್ನು ತೆರಿಗೆ ವ್ಯಾಪ್ತಿಗೆ ತರಲು ಆಸ್ತಿ ಮಾಲೀಕರಿಂದ ಸಂಬಂಧಪಟ್ಟ ಮಾಹಿತಿ ಮತ್ತು ದಾಖಲೆಗಳನ್ನು ಪಡೆದು, ಇ-ಸ್ವತ್ತು Mobile App ನಲ್ಲಿ ಅಳವಡಿಸುವುದು ಮತ್ತು ಡಿಜಿಟಲ್ ನಕ್ಷೆಯಲ್ಲಿ ಮಾಹಿತಿಯನ್ನು ಅಳವಡಿಸುವುದು. ತದನಂತರ

     ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ 9 ಮತ್ತು 11A ಅಥವಾ ನಮೂನೆ 11B ಅನ್ನು ವಿತರಿಸುವುದು ಹಾಗೂ ಪಂಚತಂತ್ರ ತಂತ್ರಾಂಶದಲ್ಲಿ ಸದರಿ ಆಸ್ತಿಗಳ ಬೇಡಿಕೆಯನ್ನು ಅಳವಡಿಸುವುದು.
2. **ಪಂಚತಂತ್ರ ತಂತ್ರಾಂಶದಲ್ಲಿದ್ದು, ಇ-ಸ್ವತ್ತು ತಂತ್ರಾಂಶದಲ್ಲಿ ಇಲ್ಲದೇ ಇರುವ ಆಸ್ತಿಗಳ ದಾಖಲೆಗಳೊಂದಿಗೆ ಇ-ಸ್ವತ್ತು ತಂತ್ರಾಂಶಕ್ಕೆ ಸೇರ್ಪಡೆ ಮಾಡುವುದು.**
   - ಪ್ರಸ್ತುತ ಪಂಚತಂತ್ರ ತಂತ್ರಾಂಶದಲ್ಲಿರುವ ಆಸ್ತಿಗಳಲ್ಲಿ ಶೇ.15 ರಷ್ಟು ಆಸ್ತಿಗಳು ಇ-ಸ್ವತ್ತು ತಂತ್ರಾಂಶದಲ್ಲಿವೆ. ಇನ್ನು ಶೇ.85 ರಷ್ಟು ಆಸ್ತಿಗಳನ್ನು ಇ-ಸ್ವತ್ತು ತಂತ್ರಾಂಶದಡಿ ತರಲು ಆಸ್ತಿಗಳ ಮಾಹಿತಿ ಮತ್ತು ಸಂಬಂಧಪಟ್ಟ ದಾಖಲೆಗಳನ್ನು ಪಂಚತಂತ್ರ ತಂತ್ರಾಂಶದಿಂದ ಪಡೆದು ಇ-ಸ್ವತ್ತು Mobile App ನಲ್ಲಿ ಅಳವಡಿಸುವುದು

ಮತ್ತು KSRSAC ರವರಿಂದ ಪಡೆದ ಡಿಜಿಟಲ್ ನಕ್ಷೆಯಲ್ಲಿ ಮಾಹಿತಿಯನ್ನು ಅಳವಡಿಸುವುದು.

- ತದನಂತರ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ 9 ಮತ್ತು 11A ಅಥವಾ ನಮೂನೆ 11B ಅನ್ನು ವಿತರಿಸುವುದು ಹಾಗೂ ಪಂಚತಂತ್ರ ತಂತ್ರಾಂಶದಲ್ಲಿ ಸದರಿ ಆಸ್ತಿಗಳ ಬೇಡಿಕೆಯನ್ನು ಅಳವಡಿಸುವುದು.

3. **ಇ-ಸ್ವತ್ತು ತಂತ್ರಾಂಶದಲ್ಲಿರುವ ಆಸ್ತಿಗಳ ಪರಿಶೀಲನೆ:**

ಈಗಾಗಲೇ ಇ-ಸ್ವತ್ತು ತಂತ್ರಾಂಶದಲ್ಲಿರುವ ಆಸ್ತಿಗಳನ್ನು ಪರಿಶೀಲಿಸಿ ದೃಢೀಕರಿಸುವುದು. ನಂತರ KSRSAC ರವರಿಂದ ಪಡೆದ ನಕ್ಷೆಯೊಂದಿಗೆ field visit ಮಾಡಿ polygon ಸೃಜಿಸುವುದು.

**KSRSAC ರವರಿಂದ Revenue ನಕ್ಷೆ ಪಡೆಯುವುದು:**

KSRSAC ರವರು ಗ್ರಾಮವಾರು ಗ್ರಾಮಠಾಣ ಆಸ್ತಿಗಳನ್ನು ಒಳಗೊಂಡಂತೆ Revenue ನಕ್ಷೆಗಳನ್ನು ಗ್ರಿಡ್ ವಾರು ತಯಾರಿಸಿ, ನಕ್ಷೆಗಳ 2 ಪ್ರತಿಗಳನ್ನು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ನೀಡುವುದು.

ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ನಕ್ಷೆಗಳ ಪ್ರತಿಯಲ್ಲಿ ಆಸ್ತಿಗಳ polygon ಅನ್ನು ರಚಿಸಿ, KSRSAC ರವರಿಗೆ ನಕ್ಷೆಗಳ ಪ್ರತಿಗಳನ್ನು ಹಿಂದಿರುಗಿಸುವುದು. ತದನಂತರ KSRSAC ರವರು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ನಕ್ಷೆಗಳ ಪ್ರತಿಯ ಆಧಾರದ ಮೇಲೆ ಡಿಜಿಟಲ್ ನಕ್ಷೆಗಳನ್ನು ತಯಾರಿಸಿ, ಇ-ಸ್ವತ್ತುರವರಿಗೆ ನೀಡಲಾಗುವುದು.

**ಆಸ್ತಿಗಳ ಮೂಲಕ ಮತ್ತು ದಾಖಲೆಗಳನ್ನು ಅಳವಡಿಸಲು TAB ಗಳನ್ನು ಬಳಸುವುದು.**

ಆಸ್ತಿಗಳ ಮಾಹಿತಿ ಮತ್ತು ದಾಖಲೆಗಳನ್ನು ಇ-ಸ್ವತ್ತು Mobile app ಗೆ ಅಳವಡಿಸಲು ಜಿಲ್ಲಾ ಪಂಚಾಯತಿಯಿಂದ 250 TAB ಗಳನ್ನು ಖರೀದಿಸಿ, ಪ್ರತಿ ಗ್ರಾಮ ಪಂಚಾಯತಿಗೆ 8 ರಂತೆ TAB ಗಳನ್ನು ನೀಡುವುದು. ಮೊದಲ ಹಂತದ ಗ್ರಾಮ ಪಂಚಾಯತಿಯಲ್ಲಿ ಈ ಪ್ರಕ್ರಿಯೆ ಮುಕ್ತಾಯಗೊಂಡ ನಂತರ TAB ಗಳನ್ನು ಬೇರೆ ಗ್ರಾಮ ಪಂಚಾಯತಿಗಳಿಗೆ ನೀಡುವುದು. ಆ ಪಂಚಾಯತಿಗಳಲ್ಲಿಯೂ ಅದೇ ಪ್ರಕಾರ ಡಿಜಿಟಲೀಕರಣ ಪ್ರಕ್ರಿಯೆಯನ್ನು ಕೈಗೊಳ್ಳುವುದು.

**ಆಸ್ತಿಗಳ ಡಿಜಿಟಲೀಕರಣ ಮತ್ತು ಆಸ್ತಿಗಳನ್ನು ತೆರಿಗೆ ವ್ಯಾಪ್ತಿಗೆ ತರಲು ಮಾನವ ಸಂಪನ್ಮೂಲದ ಬಳಕೆ.**

ಸದರಿ ಪ್ರಕ್ರಿಯೆಯನ್ನು ಗ್ರಾಮ ಪಂಚಾಯತಿಗಳಲ್ಲಿ ಕೈಗೊಳ್ಳಲು ಗ್ರಾಮ ಪಂಚಾಯತಿ ಸಿಬ್ಬಂದಿಗಳೊಂದಿಗೆ ಹೊರಗುತ್ತಿಗೆ ಸಂಸ್ಥೆಯಿಂದ ಪ್ರತಿ ಗ್ರಾಮ ಪಂಚಾಯತಿಗೆ 8 ರಂತೆ ಹೆಚ್ಚುವರಿ ಮಾನವ ಸಂಪನ್ಮೂಲವನ್ನು ಪಡೆದು ಒದಗಿಸುವುದು. ಗ್ರಾಮ ಪಂಚಾಯತಿ ಸಿಬ್ಬಂದಿಗಳ ನೇತೃತ್ವದಲ್ಲಿ ಹೊರಗುತ್ತಿಗೆ ಸಂಸ್ಥೆಯಿಂದ ಪಡೆಯಲಾದ ನೌಕರರೊಂದಿಗೆ ಪ್ರತಿ ಗ್ರಾಮ ಪಂಚಾಯತಿಗಳಲ್ಲಿ ಗ್ರಾಮ ಪಂಚಾಯತಿ ಕಾರ್ಯದರ್ಶಿ, ದ್ವಿತೀಯ ದರ್ಜೆ ಲೆಕ್ಕ ಸಹಾಯಕರು, ಕ್ಲರ್ಕ್/ಕ್ಲರ್ಕ್ ಕಂ. ಡಾಟಾ ಎಂಟ್ರಿ ಆಪರೇಟರ್ ಮತ್ತು ಬಿಲ್ ಕಲೆಕ್ಟರ್ ಗಳ ನೇತೃತ್ವದಲ್ಲಿ 4 ತಂಡಗಳನ್ನು ರಚಿಸಿ, ಪ್ರತಿ ತಂಡಕ್ಕೆ ಇಬ್ಬರು ಹೊರಗುತ್ತಿಗೆ ಸಂಸ್ಥೆಯಿಂದ ಪಡೆಯಲಾದ ನೌಕರರನ್ನು ನೇಮಿಸಿ, ಪ್ರಕ್ರಿಯೆಯನ್ನು ನಿಗದಿತ ಸಮಯದೊಳಗೆ ಮುಕ್ತಾಯಗೊಳಿಸುವುದು.

/

**ತರಬೇತಿ:**

ಗ್ರಾಮ ಪಂಚಾಯತಿಗಳಲ್ಲಿ ಪ್ರಕ್ರಿಯೆಯನ್ನು ಕೈಗೊಳ್ಳಲು ಮತ್ತು ಇ-ಸ್ವತ್ತು Mobile app ಬಳಕೆಯ ಬಗ್ಗೆ ಗ್ರಾಮ ಪಂಚಾಯತಿಯ ಎಲ್ಲಾ ಸಿಬ್ಬಂದಿಗಳಿಗೆ ಮತ್ತು ಹೊರಗುತ್ತಿಗೆ ಸಂಸ್ಥೆಯಿಂದ ಪಡೆಯಲಾದ ಎಲ್ಲಾ ನೌಕರರಿಗೆ Hands on ತರಬೇತಿಯನ್ನು NIC ವತಿಯಿಂದ ನೀಡುವುದು.

**ಸೂಚನೆಗಳು:**

- ಗ್ರಾಮಠಾಣ ಸ್ವತ್ತುಗಳನ್ನು ಗುರುತಿಸುವ ಬಗ್ಗೆ ಕರ್ನಾಟಕ ರಾಜ್ಯ ದೂರ ಸಂವೇದಿ ಅನ್ವಯಿಕ ಕೇಂದ್ರರವರು ಗ್ರಾಮಠಾಣ ಆಸ್ತಿಗಳನ್ನು ಒಳಗೊಂಡಂತೆ ರೆವಿನ್ಯೂ ನಕ್ಷೆಗಳನ್ನು ಗ್ರೀಡ್ ವಾರು ತಯಾರಿಸಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ನೀಡಲಿದ್ದು, ಸದರಿ ನಕ್ಷೆಗಳನ್ನು ಗ್ರಾಮಠಾಣ ಸ್ವತ್ತುಗಳನ್ನು ಗುರುತಿಸಲು ಉಪಯೋಗಿಸಿಕೊಳ್ಳತಕ್ಕದ್ದು.

**ಕಾಲಾವಧಿ:**

ಗ್ರಾಮ ಪಂಚಾಯತಿಯ ಎಲ್ಲಾ ಆಸ್ತಿಗಳ ಡಿಜಿಟಲೀಕರಣಗೊಳಿಸಿ ತೆರಿಗೆ ವ್ಯಾಪ್ತಿಯಿಂದ ಹೊರಗೆ ಉಳಿದ ಆಸ್ತಿಗಳನ್ನು ತೆರಿಗೆ ವ್ಯಾಪ್ತಿಗೆ ತರುವ ಪ್ರಕ್ರಿಯೆಯನ್ನು ಏಕಕಾಲಕ್ಕೆ 32 ಗ್ರಾಮ ಪಂಚಾಯತಿಗಳಲ್ಲಿ ಪ್ರಾರಂಭಿಸಿ, ಒಂದು ತಿಂಗಳ ಕಾಲಾವಧಿಯೊಳಗೆ ಮುಕ್ತಾಯಗೊಳಿಸುವುದು. ಅದರಂತೆ, ಇನ್ನುಳಿದ 64 ಗ್ರಾಮ ಪಂಚಾಯತಿಗಳಲ್ಲಿ ಪ್ರತಿ ತಿಂಗಳಿಗೆ 32 ಗ್ರಾಮ ಪಂಚಾಯತಿಗಳಲ್ಲಿ ಪ್ರಕ್ರಿಯೆಯನ್ನು ಮುಕ್ತಾಯಗೊಳಿಸಿ, 3 ತಿಂಗಳ ಕಾಲಾವಧಿಯಲ್ಲಿ ಬೆಂಗಳೂರು ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಯೋಜನೆಯನ್ನು ಅನುಷ್ಠಾನ ಮಾಡುವುದು.

## ಗ್ರಾಮ ಪಂಚಾಯತಿ ಆಸ್ತಿಗಳ ಮ್ಯಾನ್ಯೂಯಲ್ ಸಮೀಕ್ಷೆ ಕೈಗೊಳ್ಳುವುದು:

**ಪ್ರಸ್ತಾವನೆ:**

ಗ್ರಾಮ ಪಂಚಾಯತಿಗಳ ವರಮಾನವನ್ನು ಹೆಚ್ಚಿಸುವ ಉದ್ದೇಶದಿಂದ ಎಲ್ಲಾ ಆಸ್ತಿಗಳನ್ನು ತೆರಿಗೆ ವ್ಯಾಪ್ತಿಗೆ ತರುವ ಹಿನ್ನೆಲೆಯಲ್ಲಿ, ಬೆಂಗಳೂರು ನಗರ ಜಿಲ್ಲೆಯಲ್ಲಿ ಆಸ್ತಿಗಳ ಡಿಜಿಟಲೀಕರಣ ಕೈಗೊಳ್ಳುವ ಮಾದರಿಯಲ್ಲಿ ತುಮಕೂರು ಜಿಲ್ಲೆಯಲ್ಲಿ ಬರುವ ಎಲ್ಲಾ ಗ್ರಾಮ ಪಂಚಾಯತಿಗಳ ಆಸ್ತಿಗಳ ಮ್ಯಾನ್ಯೂಯಲ್ ಸಮೀಕ್ಷೆ ಕೈಗೊಳ್ಳಲು ಉದ್ದೇಶಿಸಲಾಗಿದೆ

**ಸಮೀಕ್ಷಾ ವಿಧಾನ:-**

- ಗ್ರಾಮ ಪಂಚಾಯತಿಗಳ ಆಸ್ತಿಗಳ ಮ್ಯಾನ್ಯೂಯಲ್ ಸಮೀಕ್ಷೆಯನ್ನು ಗ್ರಾಮ ಪಂಚಾಯತಿ ಸಿಬ್ಬಂದಿಗಳ ಮೂಲಕ ಕೈಗೊಂಡು ಪೂರ್ಣಗೊಳಿಸಲು ಎಲ್ಲಾ ಗ್ರಾಮ ಪಂಚಾಯತಿಗಳಿಗೆ ತಿಳಿಸಲಾಗಿರುತ್ತದೆ.
- ಈ ಉದ್ದೇಶಕ್ಕಾಗಿ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿಗಳು, ದ್ವಿ.ದ.ಲೆ.ಸ., ಬಿಲ್ ಕಲೆಕ್ಟರ್, ಡಾಟಾ ಎಂಟ್ರಿ ಆಪರೇಟರ್ ಗಳಿಗೆ ತರಬೇತಿ ನೀಡುವುದು.
- ಈ ಉದ್ದೇಶಕ್ಕಾಗಿ ಸಿದ್ಧಪಡಿಸಲಾದ ನಮೂನೆಯಲ್ಲಿ ಪ್ರತಿ ಮನೆ/ಆಸ್ತಿ ಬಳಿ ಭೇಟಿ ನೀಡಿ ಭರ್ತಿ ಮಾಡುವುದು. ಜೊತೆಗೆ ಆಸ್ತಿಯ ಫೋಟೋ ತೆಗೆಯುವುದು.
- ಸಂಗ್ರಹಿಸಲಾದ ಮಾಹಿತಿಯನ್ನು ಕಂಪ್ಯೂಟರ್ ನಲ್ಲಿ ಅಳವಡಿಸುವುದು. ಮಾಹಿತಿಯೊಡನೆ ಮನೆ, ಫೋಟೋವನ್ನು ಕೂಡ ಅಳವಡಿಸುವುದು.
- ತೆರಿಗೆ ವ್ಯಾಪ್ತಿಗೆ ಬರುವ ಎಲ್ಲಾ ಆಸ್ತಿಗಳಿಗೆ ನಿಯಮಾನುಸಾರ ತೆರಿಗೆ ನಿರ್ಧರಣೆ ಮಾಡಿ ತೆರಿಗೆ ವಿಧಿಸಿ, ವಸೂಲಾತಿಗೆ ಕ್ರಮ ಕೈಗೊಳ್ಳುವುದು.

- ಕಾಲಕಾಲಕ್ಕೆ ಆಸ್ತಿ ವಿವರಗಳಲ್ಲಿ ಬದಲಾವಣೆಯಾದಲ್ಲಿ, ಅವುಗಳನ್ನು ಅವಶ್ಯಕತೆಗನುಗುಣವಾಗಿ ಮೂಲ ದಾಖಲೆಗಳಲ್ಲಿ ಮಾರ್ಪಾಟು ಮಾಡಿಕೊಳ್ಳುವುದು.
- ಗ್ರಾಮ ಪಂಚಾಯತಿಗಳಲ್ಲಿ ನಿಗಧಿತ ನಮೂನೆ-9, ನಮೂನೆ-9ಎ, ನಮೂನೆ-11ಎ ಮತ್ತು ನಮೂನೆ-11ಬಿ ವಹಿಗಳಲ್ಲಿ ವಿವರಗಳನ್ನು ದಾಖಲಿಸುವುದು.
- ಗ್ರಾಮ ಪಂಚಾಯತಿ ವ್ಯಾಪ್ತಿಯ ಎಲ್ಲಾ ಆಸ್ತಿಗಳನ್ನು ಡಿಜಿಟಲೀಕರಣಗೊಳಿಸಿ ತೆರಿಗೆ ವ್ಯಾಪ್ತಿಗೆ ಒಳಪಡಿಸುವ ಮತ್ತು ಮ್ಯಾನ್ಯೂಯಲ್ ಸಮೀಕ್ಷೆ ಕೈಗೊಳ್ಳಲು ಅವಶ್ಯವಿರುವ TAB, ಮಾನವ ಸಂಪನ್ಮೂಲ, ನಮೂನೆಗಳು ಮತ್ತು ಇತರೆ ಸಾಮಗ್ರಿಗಳನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999ರ ಪ್ರಕರಣ 4(ಜಿ)ರಡಿ ಪಾರದರ್ಶಕತೆ ಕಾಯ್ದೆಯಿಂದ ವಿನಾಯಿತಿ ಪಡೆದ ಮೇ: ಕರ್ನಾಟಕ ರಾಜ್ಯ ವಿದ್ಯುನ್ಮಾನ ಅಭಿವೃದ್ಧಿ ನಿಗಮ ನಿಯಮಿತ (KEONICS ) ಸಂಸ್ಥೆಯ ಮೂಲಕ ಗ್ರಾಮ ಪಂಚಾಯತಿಗಳು ಪಡೆದುಕೊಳ್ಳಲು ಜಿಲ್ಲಾ ನೋಡಲ್ ಅಧಿಕಾರಿಗಳು ಕ್ರಮ ವಹಿಸುವುದು.

**ಸಮೀಕ್ಷೆಗೆ ಅನುದಾನ:**

- ಈ ಸಮೀಕ್ಷೆಗೆ ಅವಶ್ಯವಿರುವ ನಮೂನೆಗಳು ಮತ್ತು ಇತರ ಅವಶ್ಯ ಲೇಖನ ಸಾಮಾಗ್ರಿಗಳ ವೆಚ್ಚವನ್ನು ಗ್ರಾಮ ಪಂಚಾಯತಿಗಳು ತಮ್ಮ ಸ್ವಂತ ಸಂಪನ್ಮೂಲದಿಂದ ಹಾಗೂ ಅವಶ್ಯವಿದ್ದಲ್ಲಿ 14ನೇ ಹಣಕಾಸು ಆಯೋಗದ ಅನುದಾನದ ಶೇಕಡ 10% ಆಡಳಿತ ವೆಚ್ಚಕ್ಕೆ ಮೀಸಲಿರಿಸಿ ಅನುದಾನ ಭರಿಸುವುದು.

**ಮೇಲ್ವಿಚಾರಣೆ:**

- ಗ್ರಾಮ ಪಂಚಾಯತಿ ಆಸ್ತಿಗಳ ಡಿಜಿಟಲೀಕರಣ(ಬೆಂಗಳೂರು ನಗರ ಜಿಲ್ಲೆ) ಹಾಗೂ ಮ್ಯಾನ್ಯೂಲ್ ಸಮೀಕ್ಷೆಗಳನ್ನು ಗ್ರಾಮ ಪಂಚಾಯತಿಗಳ ಮೂಲಕ ಮೇಲೆ ವಿವರಿಸಲಾದ ಮಾರ್ಗಸೂಚಿಗಳನ್ವಯ ಕೈಗೊಂಡು ಸಮರ್ಪಕವಾಗಿ ಪೂರ್ಣಗೊಳಿಸುವ ಪ್ರಕ್ರಿಯೆಯನ್ನು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮೇಲ್ವಿಚಾರಣೆ ಮಾಡುವುದು. ಈ ಸಮೀಕ್ಷೆ ಕಾರ್ಯಕ್ಕೆ ಬೆಂಗಳೂರು ನಗರ ಜಿಲ್ಲಾ ಪಂಚಾಯತ್ ಹಾಗೂ ತುಮಕೂರು ಜಿಲ್ಲಾ ಪಂಚಾಯತ್ ನ ಉಪಕಾರ್ಯದರ್ಶಿಗಳನ್ನು ನೋಡೆಲ್ ಅಧಿಕಾರಿಯನ್ನಾಗಿ ನೇಮಿಸುವುದು. ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು ಸಕ್ರಿಯವಾಗಿ ತೊಡಗಿಸಿಕೊಂಡು ಸಮೀಕ್ಷಾ ಕಾರ್ಯವನ್ನು ಯಶಸ್ವಿಗೊಳಿಸುವುದು.

ಈ ಆದೇಶವನ್ನು ಸರ್ಕಾರಿ ಆದೇಶ ಸಂಖ್ಯೆ: ಗ್ರಾಅಪ 154 ಎಎಫ್ ಎನ್ 2018, ದಿನಾಂಕ:10-04-2019ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

Narayana Dep. 6/8/19

(ಡಿ.ಜಿ. ನಾರಾಯಣ)
ಉಪನಿರ್ದೇಶಕರು ಹಾಗೂ ಪದನಿಮಿತ್ತ,
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರಭಾರ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ:**

1) ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.

2) ನಿರ್ದೇಶಕರು (ಇ-ಆಡಳಿತ) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
3) ಎಲ್ಲಾ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು.
4) ಹಿರಿಯ ತಾಂತ್ರಿಕ ನಿರ್ದೇಶಕರು, ಎನ್.ಐ.ಸಿ (ಇ-ಸ್ವತ್ತು ವಿಭಾಗ) ಬೆಂಗಳೂರು.
5) ಹಿರಿಯ ತಾಂತ್ರಿಕ ನಿರ್ದೇಶಕರು, ಎನ್.ಐ.ಸಿ (ಪಂಚತಂತ್ರ ವಿಭಾಗ) ಬೆಂಗಳೂರು.
6) ನಿರ್ದೇಶಕರು, ಕರ್ನಾಟಕ ರಾಜ್ಯ ದೂರ ಸಂವೇದಿ ಅನ್ವಯಿಕ ಕೇಂದ್ರ, ಬೆಂಗಳೂರು.
7) ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

**ಪ್ರತಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿ.
3) ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿ.
4) ನಿರ್ದೇಶಕರು (ಪಂ.ರಾಜ್-1) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಸಹಾಯಕರು.
5) ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್ ಸೈಟ್, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ.
6) ಶಾಖಾ ರಕ್ಷ ಕಡತ / ಹೆಚ್ಚುವರಿ ಪ್ರತಿ.